# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1711 (1985)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ವಸತಿ ಸಚಿವರು

ವಿಷಯ : ಕೊಳಗೇರಿಗಳ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗಳ ಬಗ್ಗೆ

(ಅ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಹಾಸನ ಜಿಲ್ಲೆಯ ಕೊಳಚೆ ಪ್ರದೇಶಗಳ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಕಳೆದ 3 ವರ್ಷಗಳ ಸಮೀಕ್ಷಾ ವರದಿ ನೀಡುವುದು;

(ಆ) ಹಾಸನ ಜಿಲ್ಲೆಯಲ್ಲಿ ಎಷ್ಟು ಕೊಳಚೆ ಪ್ರದೇಶಗಳನ್ನು ಗುರುತಿಸಲಾಗಿದೆ ಮತ್ತು ಅವುಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಣೆ ಮಾಡಲು ನಿಯಮಾನುಸಾರ ಪ್ರಸ್ತಾವನೆಗಳನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; ಸದರಿ ಪ್ರಸ್ತಾವನೆಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೊಳಗೇರಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ಕೈಗೊಂಡಿರುವ ಕಾಮಗಾರಿಗಳು ಯಾವುವು; ಇದಕ್ಕಾಗಿ ಬಿಡುಗಡೆಯಾಗಿರುವ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿ ಕೊಳಗೇರಿ ನಿವಾಸಿಗಳ ಆರೋಗ್ಯ ಮತ್ತು ಶುಚಿತ್ವ ಕಾಪಾಡುವ ಬಗ್ಗೆ ಅರಿವು ಮೂಡಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು; ಈ ಕಾರ್ಯಗಳಿಗಾಗಿ ಕಳೆದ 3 ವರ್ಷಗಳಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು? (ವಿವರಗಳನ್ನು ನೀಡುವುದು)